ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

15

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE 4/2/2021

# ಏಕಕಾಲಕ್ಕೆ ಲೋಕಸಭೆ, ಅಸೆಂಬ್ಲಿ ಚುನಾವಣೆ ಜಾರಿಗೆ ಕಾಲಮಿತಿ ಇಲ್ಲ

4/2/21

ನವದೆಹಲಿ: ದೇಶಾದ್ಯಂತ ಏಕಕಾಲಕ್ಕೆ ಲೋಕಸಭಾ ಮತ್ತು ವಿಧಾನಸಭಾ ಚುನಾವಣೆ ನಡೆಸುವ ನೀತಿ ಜಾರಿಗೆ ಸರ್ಕಾರ ಯಾವುದೇ ಕಾಲಮಿತಿ ನಿಗದಿ ಮಾಡಿಲ್ಲ ಎಂದು ಬುಧವಾರ ಸಂಸತ್ತಿಗೆ ಮಾಹಿತಿ ನೀಡಲಾಗಿದೆ. ಈ ಕುರಿತ ಪ್ರಶ್ನೆಗೆ ಲಿಖಿತ ಉತ್ತರ ನೀಡಿದ ಕಾನೂನು ಸಚಿವ ರವಿಶಂಕರ್ ಪ್ರಸಾದ್, ಸಂಸದೀಯ ಸ್ಥಾಯಿ ಸಮಿತಿ, ಕಾನೂನು ಮತ್ತು ನ್ಯಾಯಕ್ಕೆ ಸಂಬಂಧಿಸಿದ ಇಲಾಖೆ ಮತ್ತು ಚುನಾವಣಾ ಆಯೋಗ ದೇಶಾದ್ಯಂತ ಏಕಕಾಲಕ್ಕೆ ಚುನಾವಣೆ ನಡೆಸುವ ಕುರಿತು ಪರಿಶೀಲಿಸುತ್ತಿವೆ. ಆದರೆ.. ಅದರ ಅನುಷ್ಠಾನಕ್ಕೆ ಇನ್ನೂ ಸಮಯ ನಿಗದಿಪಡಿಸಿಲ್ಲ ಎಂದು ತಿಳಿಸಿದ್ದಾರೆ.